# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24 ನೇ ಸಾಲಿನ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಸಕಇ 245 ಜಿಎಂಎಸ್ 2004, ದಿನಾಂಕ:27.04.2005 ಹಾಗೂ 12.10.2006
2. ಸರ್ಕಾರದ ಆದೇಶ ಸಂಖ್ಯೆ:MWD 80 MDC 2014, ದಿ:28.02.2015.
3. ಸರ್ಕಾರದ ಆದೇಶ ಸಂಖ್ಯೆ:MWD 60 MDC 2016, ದಿ:27.10.2016.
4. ಸರ್ಕಾರದ ಆದೇಶ ಸಂಖ್ಯೆ:MWD 55 MDC 2017, ದಿ:19.05.2017.
5. ಸರ್ಕಾರದ ಆದೇಶ ಸಂಖ್ಯೆ:MWD 29 MDC 2020, ದಿ:27.08.2020.
6. ಸರ್ಕಾರದ ಆದೇಶ ಸಂಖ್ಯೆ:MWD 61 MDC 2021, ದಿ:29.09.2021.
7. ಸರ್ಕಾರದ ಆದೇಶ ಸಂಖ್ಯೆ:MWD 50 MDC 2021, ದಿ:09.08.2021.
8. ಸರ್ಕಾರದ ಆದೇಶ ಸಂಖ್ಯೆ:MWD 61 MDC 2021, ದಿ:15.11.2010 ಮತ್ತು 02.12.2022.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರ ಏಕ ಕಡತ ಸಂಖ್ಯೆ:ಕಅಅನಿ/ಕ್ರಿಯಾ ಯೋಜನೆ/2023-24.

ಪ್ರಸ್ತಾವನೆ,

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಿಂದ (8) ರವರೆಗಿನ ಸರ್ಕಾರದ ಆದೇಶಗಳಲ್ಲಿ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ವಿವಿಧ ಸಾಲ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ(9) ರಲ್ಲಿನ ಏಕ ಕಡತದಲ್ಲಿ 2023-24 ನೇ ಸಾಲಿನ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

K M D C LTD.
Head Office, Bangalore
25 SEP 2023
No. 317

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 70 MDC 2023, ಬೆಂಗಳೂರು**

**ದಿನಾಂಕ:22.09.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24 ನೇ ಸಾಲಿಗೆ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ

.......2

ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಿಗೆ ಈ ಕೆಳಕಂಡಂತೆ ಹಲವು ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

| ಕ್ರ.ಸಂ. | ಯೋಜನೆಯ ಹೆಸರು | ಹಿಂದಿನ ಮಾರ್ಗಸೂಚಿಗಳು | ಪರಿಷ್ಕೃತ ಮಾರ್ಗಸೂಚಿಗಳು |
|---|---|---|---|
| 1 | ಸ್ವಾವಲಂಬಿ ಸಾರಥಿ ಯೋಜನೆ/(ಪ್ಯಾಸೆಂಜರ್ ಆಟೋರಿಕ್ಷ/ಟ್ಯಾಕ್ಸಿ/ಗೂಡ್ಸ್ ವಾಹನ ಖರೀದಿಸಲು ಸಹಾಯಧನ ಯೋಜನೆ) | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.4.50 ಲಕ್ಷ ಮೀರಬಾರದು | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| | | | ನಗರ ಪ್ರದೇಶದಲ್ಲಿನ ಪ್ಯಾಸೆಂಜರ್ ಆಟೋರಿಕ್ಷಗಳಿಗೆ permit ಕಡ್ಡಾಯಗೊಳಿಸಲಾಗಿದೆ. |
| 2 | ಸ್ವಯಂ ಉದ್ಯೋಗ ಯೋಜನೆ | 1)ಕುಟುಂಬದ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದ ರೂ.81,000/- ನಗರ ಪ್ರದೇಶ ರೂ.1,03,000/- ಮೀರಿರಬಾರದು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| | | 2)ರಾಷ್ಟ್ರೀಕೃತ /ಷೆಡ್ಯೂಲ್ ಬ್ಯಾಂಕ್‌ಗಳ ಸಹಯೋಗದೊಂದಿಗೆ ಸಾಲ ಮತ್ತು ಸಹಾಯಧನ ಒದಗಿಸಲಾಗುವುದು. | ರಾಷ್ಟ್ರೀಕೃತ ಬ್ಯಾಂಕುಗಳು/ಷೆಡ್ಯೂಲ್ ಬ್ಯಾಂಕ್/Co-operative Banks/Co-operative Societies /Private ಬ್ಯಾಂಕ್ ಗಳಿಂದ ಪಡೆಯುವ ಸಾಲ ಮೊತ್ತದ ಶೇ.33 ರಷ್ಟು ಅಥವಾ ಗರಿಷ್ಠ ಒಂದು ಲಕ್ಷ ರೂ.ವರೆಗೆ ಸಹಾಯಧನವನ್ನು ನೀಡಲಾಗುವುದು. |
| 3 | ವೃತ್ತಿ ಪ್ರೋತ್ಸಾಹ ಯೋಜನೆ | 1) ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ ಮಿತಿಯ ರೂ.1,03,000/- (ನಗರ ಪ್ರದೇಶ) ಮತ್ತು ರೂ.81,000/- (ಗ್ರಾಮೀಣ ಪ್ರದೇಶ) ಮೀರಿರಬಾರದು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| | | 2) ಫಲಾನುಭವಿಗಳ ಆಯ್ಕೆ ಸಮಿತಿಯ ಅಧ್ಯಕ್ಷರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು | ಆಯ್ಕೆ ಸಮಿತಿಯ ಅಧ್ಯಕ್ಷರು ವಿಧಾನ ಸಭಾ ಕ್ಷೇತ್ರದ ಮಾನ್ಯ ಶಾಸಕರು ಹಾಗೂ ನೋಡಲ್ ತಾಲ್ಲೂಕುಗಳಾಗಿ ಆಯ್ಕೆ ಮಾಡಿಕೊಂಡಿರುವ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು – ಸಹ ಅಧ್ಯಕ್ಷರು. |

.......3

| | | | |
|---|---|---|---|
| 4 | ಶ್ರಮಶಕ್ತಿ ಯೋಜನೆ | ಎಲ್ಲಾ ಮೂಲಗಳಿಂದ ಕೌಟುಂಬಿಕ ವಾರ್ಷಿಕ ಆದಾಯ ರೂ.3.50 ಲಕ್ಷದೊಳಗಿರಬೇಕು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| 5 | ಶ್ರಮಶಕ್ತಿ (ವಿಶೇಷ ಮಹಿಳಾ) ಯೋಜನೆ | ಎಲ್ಲಾ ಮೂಲಗಳಿಂದ ಕೌಟುಂಬಿಕ ವಾರ್ಷಿಕ ಆದಾಯ ರೂ.3.50 ಲಕ್ಷದೊಳಗಿರಬೇಕು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು |
| | | ಅರ್ಜಿದಾರರು ವಯೋಮಿತಿ 18 ರಿಂದ 55 ವರ್ಷಗಳು | ಅವಿವಾಹಿತ ಮಹಿಳೆಯರು 40-55 ವರ್ಷದೊಳಗಿರಬೇಕು. ವಿಧವೆ/ವಿಚ್ಛೇದಿತ ಮಹಿಳೆಯರು 18 ರಿಂದ 55 ವರ್ಷಗಳು. |
| 6 | ಸಮುದಾಯ ಆಧಾರಿತ ತರಬೇತಿ ಯೋಜನೆ | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.1,03,000/- ನಗರ ಪ್ರದೇಶಗಳಿಗೆ ರೂ.96,000/- ಗ್ರಾಮಾಂತರ ಪ್ರದೇಶಗಳಿಗೆ ಮೀರಬಾರದು. | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00 ಲಕ್ಷ ಮೀರಬಾರದು. |
| | | | Office Soft Skill ಮತ್ತು Retail Marketing ತರಬೇತಿ ಸೇರಿಸಿ ಒದಿಕೊಳ್ಳತಕ್ಕದ್ದು. |
| | | ಫಲಾನುಭವಿಗಳ ಆಯ್ಕೆ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿರುವ ಸಮಿತಿಯಿಂದ ಆಗಬೇಕು | ಆಯ್ಕೆ ಸಮಿತಿಯನ್ನು ತೆಗೆದುಹಾಕಲಾಗಿದೆ. |
| 7 | ಗಂಗಾ ಕಲ್ಯಾಣ ಯೋಜನೆ | 1) ಅರ್ಜಿದಾರರ ವಯೋಮಿತಿ 18 ರಿಂದ 55 ವರ್ಷಗಳು | ಅರ್ಜಿದಾರ ವಯಸ್ಸು ಕನಿಷ್ಠ 18 ವರ್ಷ ಇರಬೇಕು. ಅರ್ಜಿದಾರರ ಗರಿಷ್ಠ ವಯೋಮಿತಿ 55 ವರ್ಷ ಇರುವುದನ್ನು ರದ್ದುಪಡಿಸಲಾಗಿದೆ. |
| | | 2) ಎಲ್ಲಾ ಮೂಲಗಳಿಂದ ವಾರ್ಷಿಕ ಆದಾಯ ರೂ.96,000/- | ಎಲ್ಲಾ ಮೂಲಗಳಿಂದ ಕುಟುಂಬದ ಆದಾಯ ರೂ.6.00ಲಕ್ಷ ಮೀರಬಾರದು. |
| 8 | NMDFC Term Loan, Micro Finance loan, Virasat ಯೋಜನೆ. | ಫಲಾನುಭವಿಗಳ ಆಯ್ಕೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯ ಸಮಿತಿಯಿಂದ ಮಾಡುವುದು. | ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯು ತೆಗೆದು ಹಾಕಲಾಗಿದೆ ರಾಜ್ಯಮಟ್ಟದ ಆಯ್ಕೆ ಸಮಿತಿ ಫಲಾನುಭವಿಗಳ ಆಯ್ಕೆ ಮಾಡುವುದು. |

ಇದಕ್ಕೆ ತಗಲುವ ವೆಚ್ಚವನ್ನು ಆಯಾ ಆರ್ಥಿಕ ವರ್ಷದಲ್ಲಿ ಈ ಯೋಜನೆಗಳಿಗೆ ನಿಗದಿಪಡಿಸಲಾಗುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು ಹಾಗೂ ಫಲಾನುಭವಿ ಆಯ್ಕೆಯನ್ನು ಸದರಿ ಅನುದಾನದ ಮಿತಿಯಲ್ಲಿಯೇ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/9/2023
(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ.

**ಗೆ:**

1. ಪ್ರಧಾನ ಮಹಾಲೇಖಪಾಲರು (ಅ ಮತ್ತು ಇ) (ಲೆಕ್ಕ ಪರಿಶೋಧನೆ-1 & 2) ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಕೆ.ಎಂ.ಡಿ.ಸಿ. ಭವನ, ಶೇಷಾದ್ರಿಪುರಂ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು. (ಕೆ.ಎಂ.ಡಿ.ಸಿ. ಮುಖಾಂತರ).
4. ಎಲ್ಲಾ ಜಿಲ್ಲೆಯ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು(ಕೆ.ಎಂ.ಡಿ.ಸಿ. ಮುಖಾಂತರ).
5. ಎಲ್ಲಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು. (ಕೆ.ಎಂ.ಡಿ.ಸಿ. ಮುಖಾಂತರ).
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸಮನ್ವಯ ಅಧಿಕಾರಿ, ಸಹಾಯವಾಣಿ ಕೇಂದ್ರ (24x7), ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.